ಕರ್ನಾಟಕ ಸರ್ಕಾರ

ಸಂಖ್ಯೆ:ಲೋಇ 126 ಸಿಆರ್‌ಎಂ 05

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು:ದಿನಾಂಕ:26-10-05.

## ಸುತ್ತೋಲೆ

ವಿಷಯ:- ಇತ್ತೀಚಿನ ಬಾರಿ ಮಳೆ ಹಾಗೂ ಪ್ರವಾಹದಿಂದ ಹಾನಿಗೊಂಡಿರುವ ರಸ್ತೆಗಳನ್ನು ದುರಸ್ತಿಗೊಳಿಸಲು ನಿಗದಿಪಡಿಸಿರುವ ಮಾರ್ಗಸೂಚಿ ಬಗ್ಗೆ.

ಅಕ್ಟೋಬರ್ ತಿಂಗಳಲ್ಲಿ ಬಿದ್ದ ಬಾರಿ ಮಳೆಯಿಂದ ಹಾನಿಗೊಂಡಿರುವ ರಸ್ತೆಗಳನ್ನು ತುರ್ತಾಗಿ ದುರಸ್ತಿ ಮಾಡಿ ಕೂಡಲೇ ಸುಗಮ ವಾಹನ ಸಂಚಾರಕ್ಕೆ ವ್ಯವಸ್ಥೆ ಮಾಡಬೇಕಾಗಿರುತ್ತದೆ. ಈ ಸಂಬಂಧದಲ್ಲಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಂದ ಪ್ರಕೃತಿ ವಿಕೋಪ ನಿಧಿಯಡಿಯಲ್ಲಿ ಹಣವನ್ನು ಪಡೆದು ಕೆಲಸವನ್ನು ಕೂಡಲೇ ಮಾಡಬೇಕಾಗಿರುತ್ತದೆ.

ಆಯಾ ಜಿಲ್ಲೆಯ ಮಳೆ ಹಾಗೂ ಪ್ರವಾಹದಿಂದ ಹಾನಿಗೊಂಡಿರುವ ರಸ್ತೆಗಳ ದುರಸ್ತಿಗೆ ಬೇಕಾಗಿರುವ ಮೊತ್ತಕ್ಕೆ ಕ್ರೋಢೀಕೃತ ಅಂದಾಜನ್ನು ತಯಾರಿಸಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಕೂಡಲೇ ಕಳುಹಿಸಿ ಹಣವನ್ನು ಮಂಜೂರು ಮಾಡಿಸಿಕೊಂಡು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲು ಸೂಚಿಸಿದೆ. ಈ ಬಗ್ಗೆ ತೆಗೆದುಕೊಂಡಿರುವ ಕ್ರಮವನ್ನು ಮರು FAX ನಲ್ಲಿ ಸರ್ಕಾರಕ್ಕೆ ಸಲ್ಲಿಸಲು ಸೂಚಿಸಿದೆ.

ಅತ್ಯಂತ ಜರೂರಾಗಿ ತೆಗೆದುಕೊಳ್ಳಬೇಕಾಗಿರುವ ಕಾಮಗಾರಿಗಳಿಗೆ ಸ್ಥಳದ ಪರಿಸ್ಥಿತಿಯ ಸಂದರ್ಭವನ್ನು ಜಿಲ್ಲಾಧಿಕಾರಿಗಳಿಗೆ ವಿವರಿಸಿ ತತ್‌ಕ್ಷಣ ಕಾಮಗಾರಿಯನ್ನು ಪ್ರಾರಂಭ ಮಾಡಲು ಸೂಚಿಸಿದೆ. ಈ ಬಗ್ಗೆ ಕರ್ನಾಟಕ ಪಾರದರ್ಶಕತೆ ಕಾಯ್ದೆಗೆ ವಿನಾಯಿತಿಯನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಂದ ತಪ್ಪದೆ ಪಡೆದು ಕೆಲಸವನ್ನು ಕೈಗೊಳ್ಳಲು ಸೂಚಿಸಿದೆ.

ಮೇಲಿನಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ ಸರ್ಕಾರಕ್ಕೆ ವರದಿಯನ್ನು ಕೂಡಲೇ ಸಲ್ಲಿಸಲು ತಿಳಿಸಿದೆ.

(ಟಿ.ಸುಕುಮಾರ್)
ಸರ್ಕಾರದ ಕಾರ್ಯದರ್ಶಿಗಳು,
ಲೋಕೋಪಯೋಗಿ ಇಲಾಖೆ.

ಇವರಿಗೆ:

1)ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
2)ಮುಖ್ಯ ಯೋಜನಾಧಿಕಾರಿಗಳು, ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ, ಬೆಂಗಳೂರು.
3)ಪ್ರಧಾನ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿ, ಬೆಂಗಳೂರು.
4)ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ(ಉತ್ತರ), ಧಾರವಾಡ.
5)ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ(ದಕ್ಷಿಣ), ಬೆಂಗಳೂರು.
6)ಹೆಚ್ಚುವರಿ ಪ್ರತಿಗಳು.